7. ನೆಲ ಮತ್ತು ಹಿತ್ತಲು ಮಟ್ಟವು ರೋಜೀನಾ ವಾಕೀಜಾ ಬಗ್ಗೆ ಕಕ್ಕಸ ಕಟ್ಟತಕ್ಕ ಸ್ಥಳವು ಮತ್ತು ಮನೆ ಬಚ್ಚಲು ನೀರು ಹೋಗುವದಕ್ಕೆ ಕಟ್ಟತಕ್ಕ ಮೊಹರಿ ತರಹೆ ಮತ್ತು ಜಾಗ ಸಹ ಸ್ಯಾನಿಟರಿ ಇಂಜನಿಯರವರು ಅಪ್ಪಣೆ ಮಾಡಲು ರೀತಿಯಲ್ಲಿರತಕ್ಕದ್ದು.

8. ಬಂದು ಮತ್ತ, ಪಣ ಅಥವಾ ಜಾತಿಯವರಿಗೆ ಏರ್ಪಡಿಸಿರುವ ಬೀದಿಯಲ್ಲಿನ ಮನೆಯಲ್ಲಿ ಸದರೀ ಬೀದಿಯ ಸಮಸ್ತ ಜನಗಳ ಬರಹ ಮೂಲಕವಾದ ಒಪ್ಪತದ ಮೇಲೆ ಡೆಪ್ಯುಟಿ ಕಮಿಷರ್ಸರವರು ಮಂಜೂರ್ಮಾಡಿದ ಹೊರ್ತು ಇತರ ಮತ್ತ, ಪಣ ಯಾ ಜಾತಿಯವರು ವಾಸ ಮಾಡಕೂಡದು.

9. ಕಟ್ಟಡಕ್ಕಾಗಿ ಕೊಟ್ಟಿರುವ ನಿವೇಶನಗಳಲ್ಲಿ ಹಳ್ಳ ತೆಗಿಯಕೂಡದು. ಕಟ್ಟಡಕ್ಕೋಸ್ಕರವಾಗಿ ಯಾ ನೆಲ ಮಟ್ಟವನ್ನು ಯಾತ್ರಸಾವದಕ್ಕಾಗಲಿ ಜಕಾಗುವ ಮಣ್ಣನ್ನು ಸ್ಯಾನಿಟರಿ ಇಂಜನಿಯರವರ ಅಪ್ಪಣೆ ಪ್ರಕಾರ ತೋರಿಸಲ್ಪಡುವ ಜಾಗಾದಲ್ಲಿ ತೆಗದುಕೊಳ್ಳತಕ್ಕದ್ದು.

10. ಮೇಲ್ಕಂಡ ಷರತ್ತುಗಳ ಪೈಕಿ ಯಾವದಕ್ಕಾದರು ತಪ್ಪು ನಡದಲ್ಲಿ ಕೊಡಲ್ಪಟ್ಟರುವ ನಿವೇಶನವನ್ನ ಹಿಡುವಳೀದಾರನು ಮತ್ಯಾವ ವಿಚಾರಣೆಯೂ ಇಲ್ಲದ ಹೋಗಲಾಡಿಸಿಕೊಳ್ಳುವದಕ್ಕೆ ಗುರಿಯಾಗುವನು.

11. ಮೇಲ್ಕಂಡ ಷರತ್ತುಗಳ ಪೈಕಿ ಯಾವದಕ್ಕಾದರೂ ತಪ್ಪು ನಡದಪ್ಪಕ್ಕೋಸ್ಕರ ನಿವೇಶನವನ್ನ ಸರ್ಕಾರಕ್ಕೆ ಕೀರಿಸಿಕೊಂಡ ಬಳಿಕ ಹಿಡುವಳೀದಾರನಾಗಲಿ ಅಥವಾ ಅವನಿಂದ ಪಡದುಕೊಂಡವರಾಗಲಿ ಯಾವ ವಿಧವಾದ ಪರಿಹಾರ ದ್ರವ್ಯಕ್ಕೆ ಇಪ್ಪೂ ಸದರಿ ನಿವೇಶನದ ಮೇಲೆ ಖರ್ಚು ಮಾಡಿರುವ ಲಾಗವಡಿಗೂ ಹಕ್ಕುದಾರರಾಗುವದಿಲ್ಲ.

ಎಂ. ಜಿ. ಕೃಷ್ಣಸ್ವಾಮಿರಾವ್,
ವೈಸ್ ಪ್ರೆಸಿಡೆಂಟ್.

ಮೈಸೂರು ಸಿಟಿ ಮ್ಯುನಿಸಿಪಾಲಿಟಿ.

ಇಸ್ತಹಾರ್ ತಾರೀಖು 29ನೆ ಮಾರ್ಚ್ 1907.

ಸ್ರ 1907ನೆ ಇಸವಿ ಜುಲೈ ಮಾಹೆ ತಾರೀಖು 1ರ ಲಾಗಾಯಿತು 1908ನೆ ಇಸವಿ ಜೂನ್ ಮಾಹೆ ತಾರೀಖು 30ರ ವರಿಗೆ ಈ ಕೆಳಗಿನ ಎ. ಷೆಡ್ಯೂಲಿನಲ್ಲಿ ನಮೂದಿಸುವ ಮೈಸೂರು ಸಿಟಿಗೆ ಸೇರಿದ ತಮಾಂ ಟೋಲ್ ಗೇಟುಗಳ ಮುಖಾಂತ್ರ ಸಿಟಿ ವಳಕ್ಕೆ ಬರುವ ಗಾಡಿಗಳು, ಜಾನವಾರುಗಳು, ವಗ್ಗೈರೆಗಳ ಮೇಲೆ ಬಿ. ಷೆಡ್ಯೂಲಿನಲ್ಲಿ ನಮೂದಾಗುವ ದರದಂತೆ ಸಿಟಿ ಮ್ಯುನಿಸಿಪಲ್ ರೆಗ್ಯುಲೇರ್ಷ 78 ಮತ್ತು 79ನೆ ಸೆಕ್ಷ್ಷನ್‌ಗಳಲ್ಲಿ ನಮೂದಿಸುವ ಷರತ್ತುಗಳಿಗೆ ವಳಪಡಿಸಿ ಪ್ರತಿ ಬಂದು ಟೋಲ್ ಗೇಟನಲ್ಲಿಯಾಗಲೀ ಅಥವಾ ದರೋಬಸ್ತ ಗೇಟುಗಳಲ್ಲಿಯಾಗಲಿ ಟೋಲು ವಸೂಲ್ಮಾಡುವ ಬಾಬನ್ನು 1907ನೆ ಇಸವಿ ಮೇ ತಾರೀಖು 20ನೆ ಮಧ್ಯಾಹ್ನ 1 ಘೆಂಟೆ ಲಾಗಾಯಿತು ರಂಗಾಚಾರ್ಲು ಯವರ ಮೆಮೋರಿಯಲ್ ಹಾಲಿನಲ್ಲಿ ಪ್ರಸಿಡೆಂಟರವರಿಂದ ಯಾ ಅವರಿಂದ ಸ್ಪೆಷಲ್ಲಾಗಿ ನೇಮಿಸಲ್ಪಟ್ಟ ಇತರ ಆಫಿಸರವರಿಂದ ಬಹಿರಂಗವಾಗಿ ಹರಾಜು ಹಾಕಲ್ಪಡುತ್ತೆ.

2. ಹರಾಜಿನಲ್ಲಿ ಬಾಬನ್ನು ಪಡೆಯುವ ಕಂಟ್ರಾಕ್ಟರು ಬಿ. ಷೆಡ್ಯೂಲಿನಲ್ಲಿ ನಮೂದಾಗುವ ರೇಟಿನಂತೆಯೇ ಗೇಟುಗಳ ಮುಖಾಂತರ ಸಿಟಿ ವಳಕ್ಕೆ ಬರುವ ಗಾಡಿ ವಗ್ಗೈರೆಗಳ ಮೇಲೆ ಟೋಲ್ ವಸೂಲ್ಮಾಡಬೇಕು. ಹೆಚ್ಚು ರೇಟನ್ನು ವಸೂಲ್ಮಾಡ ಕೂಡದು. ಶಿವಾಯಿ ಪ್ರೆಸಿಡೆಂಟರವರಿಂದ ವಿಧಾಯಕ ಮಾಡಲ್ಪಡುವ ಫಾರಂನಲ್ಲಿ ಕ್ರಮವಾಗಿ ಸಾಲ್ ಮಾಹೆ ತಾರೀಖು ನಿತ್ಯ ಟೋಲು ಪಾವತಿ ಮಾಡತಕ್ಕ ಆಸಾಮಿಗಳಿಗೆ ರಕೀದಿ ಕೊಡಬೇಕು.

3. ಎಲ್ಲಾ ದರಕ್ಕಿಂತ ಜಾಸ್ತಿ ದರವನ್ನೇ ಆಗಲಿ ಅಥವಾ ಮತ್ಯಾವ ದರವನ್ನೇ ಆಗಲೀ ಮಂಜೂರು ಮಾಡುವ ಅಧಿಕಾರವು ಪ್ರಸಿಡೆಂಟರವರಲ್ಲಿ ಇರುತ್ತದೆ.

4. ಪ್ರತಿ ತಿಂಗಳು 10ನೆ ತಾರೀಖು ವಳಗಾಗಿ ಹಿಂದಣ ಮಾಹೆಯ ಖಿಸ್ತು ಪಾವತಿ ಮಾಡಬೇಕು. ಹರಾಜು ಖೈದಾದ ಕೂಡ್ಲೆ ಬಾಬನ್ನು ಪಡೆಯತಕ್ಕ ಕಂಟ್ರಾಕ್ಟರು ಎರಡು ಮಾಹೆಗಳ ಖಿಸ್ತಿಗೆ ಸವುವಾದ ಮೊಬಲಗನ್ನು ಡಿಪಾಜಿಟ್ ಬಗ್ಗೆ ಹಾಜರ್ಮಾಡಬೇಕು. ಷರತ್ತುಗಳ ಪ್ರಕಾರ ಕಂಟ್ರಾಕ್ಟು ನಡೆದರೆ ಡಿಪಾಜಿಟ್ ನಲ್ಲಿರುವ ಮೊಬಲಗನ್ನು ಆಖೈರು ಎರಡು ಮಾಹೆಗಳ ಖಿಸ್ತು ಬಗ್ಗೆ ಜಮೆಗೆ ತೆನೆದುಕೊಳ್ಳುತ್ತೆ.

5. ಹರಾಜು ಖೈದಾದಕೂಡ್ಲೆ ಡಿಪಾಜಿಟ್ ಬಗ್ಗೆ ಮೊಬಲಗನ್ನು ಹಾಜರ್ಮಾಡದೆ ಇದ್ದರೆ ಖರ್ಚಿಗೂ ಮತ್ತು ಲುಕ್ಸಾನಿಗೂ ಅವಲ್ ಕ್ಷಂಟ್ರಾಕ್ಟುದಾರನನ್ನು ಗುರಿಪಡಿಸಿ ಪುನಹ ಹರಾಜು ಮಾಡಿಸುತ್ತೆ. ಖಿಸ್ತು ಮೊಬಲಗು ವಾಯಿದೆ ವಳಗೆ ಹಾಜರ್ಮಾಡಲು ತಪ್ಪಿದರೆ ಡಿಪಾಜಿಟ್ ಮೊಬಲಗನ್ನು ದಂಡವಾಗಿ ತೆಗದುಕ್ಕೊಂಡು ಬಾಬನ್ನು ದುಸರಾ ಹರಾಜು ಮಾಡಿಸಿ ಆದರಲ್ಲಿ ನಷ್ಟವೇನಾದರೂ ಆದಲ್ಲಿ ಆ ನಷ್ಟಕ್ಕೆ ಅವಲ ದರಖಾಸ್ತುದಾರನನ್ನು ಗುರಿಪಡಿಸುತ್ತೆ. ಎರಡನೆ ಹರಾಜಿನಲ್ಲಿ ನಫೆ ಖಂದಲ್ಲಿ ಮೊದಲು ದರಖಾಸ್ತುದಾರನಿಗೆ ಸದರಿ ನಫೆಗೆ ಹಕ್ಕು ಇರುವದಿಲ್ಲ.

6. ಪ್ರತಿ ಒಬ್ಬ ಕಂಟ್ರಾಕ್ಟರು ರೋಜೀನಾ ಟೋಲು ಗೇಟುಗಳ ಮುಖಾಂತ್ರ ಪ್ರವೇಶಮಾಡುವ ತರಹಾವಾರಿ ಗಾಡಿಯಾ ಜಾನವಾರುಗಳು ಇವುಗಳ ಮೇಲೆ ವಸೂಲಾದ ಟೋಲ್ ಯಾನೆ ಸುಂಕ ಇವುಗಳ ತಪ್ಸೀಲು ತೋರಿಸುವ ಲೆಕ್ಕವನ್ನು ಪ್ರಸಿಡೆಂಟರವರು ವಿಧಾಯಕ ಮಾಡುವ ನಮೂನೆಯಲ್ಲಿಟ್ಟು ಅಂಥಾ ಲೆಕ್ಕವನ್ನು ಕಂಟ್ರಾಕ್ಟರು ಪ್ರತಿ ಮಾಹೆಯಲ್ಲಿಯೂ ಪ್ರೆಸಿಡೆಂಟರವರ ಇನ್‌ಸ್ಪೆಕ್ಷ್ಷ ಬಗ್ಗೆ ಹಾಜರ್ಮಾಡಬೇಕು. ಶಿವಾಯಿ ಸಾಯರು ಅಥವಾ ಮ್ಯುನಿಸಿಪಲ್ ಉದ್ಯೋಗಸ್ಥರು ಅಪೇಕ್ಷಿಸಿದಾಗ ಅಂಥಾ ಲೆಕ್ಕಗಳನ್ನು ಅವರ ಇನ್‌ಸ್ಪೆಕ್ಷ್ಷ ಬಗ್ಗೆ ಹಾಜರ್ಮಾಡುವದಕ್ಕು ಬದ್ಧನಾಗಿರತಕ್ಕದ್ದು.

7. ಪ್ರತಿ ಒಬ್ಬ ಕಂಟ್ರಾಕ್ಟರು ಟೋಲು ಗೇಟುಗಳ ಮುಖಾಂತರ ಬರತಕ್ಕ ಗಾಡಿ ಯಾ ಜಾನುವಾರುಗಳ ತಪ್ಸೀಲು ಲೆಕ್ಕವನ್ನು 6ನೆ ಕಲಂನಲ್ಲಿ ನಮೂದಿಸಿರುವಂತೆ, ಇಷತಕ್ಕ ಬಗ್ಗೆ ಆಯಾಯು ಕಂಟ್ರಾಕ್ಟುದಾರನ ಸ್ವಂತ ಖರ್ಚಿನಿಂದ ಪ್ರತಿ ಬಂದು ಟೋಲು ಗೇಟಿನಲ್ಲಿಯೂ, ಒಟ್ಟೊಬ್ಬ ಮುತ್ಸದ್ದಿಯನ್ನು ಇಡುವದಕ್ಕೆ ಬದ್ಧನಾಗಿರತಕ್ಕದ್ದು.

8. ಹಾಲಿ ಇರುವ ಟೋಲು ಗೇಟುಗಳನ್ನು ಮತ್ತು ಮನೆಗಳನ್ನು ಕಂಟ್ರಾಕ್ಟರು ಬಳ್ಳೀ ಸ್ಥಿತಿಯಲ್ಲಿಟ್ಟುಕೊಂಡು ಅವುಗಳನ್ನು ಉಪಯೋಗಮಾಡಿಕೊಳ್ಳಬಹುದು.

9. ಈ ಮೇಲ್ಕಂಡ ಷರತ್ತುಗಳಿಗೆ ವಳಪಟ್ಟು ಕಂಟ್ರಾಕ್ಟು ಬಾಬನ್ನು ಸಲೀಸು ನಡಿಸಿಕ್ಕೊಂಡು ಹೋಗತಕ್ಕ ವಿಚಾರದಲ್ಲಿ ಕಂಟ್ರಾಕ್ಟರು ಪ್ರೆಸಿಡೆಂಟರವರಿಂದ ವಿಧಾಯಕವಾದ ನಮೂನೆಯಲ್ಲಿ ಛಾಪಾಕಾಗದದಲ್ಲಿ ರೂಲ್ಸು ಪ್ರಕಾರ ಮುಚ್ಚಳಿಕೆ ಬರೆದುಕೊಡಬೇಕು.

10. ಈ ಕೆಳಗೆ ನಮೂದಾಗುವುಗಳ ಮೇಲೆ ಕಂಟ್ರಾಕ್ಟರು ಟೋಲನ್ನು ವಸೂಲ್ಮಾಡಕೂಡದು :—

1. ಮ್ಯುನಿಸಿಪಾಲಿಟಿಗೆ ತೆರಿಗೆ ಪಾವತಿ ಮಾಡಿ ನಂಬರು ಹಾಕಿಸಿಕೊಂಡಿರತಕ್ಕ ಗಾಡಿಗಳು ಅಥವಾ ಕ್ಯಾರೇಜುಗಳು, ಮ್ಯುನಿಸಿಪಾಲಿಟಿಯಿಂದ ಪಡದಿರತಕ್ಕ ಪ್ಲೇಸುಗಳನ್ನು ಹಾಜರ್ಮಾಡುವ ಗಾಡಿಗಳು ಅಥವಾ ಜಾನುವಾರುಗಳು ಮತ್ತು ಗವರನ್‌ಮೆಂಟು ಯಾ ಮ್ಯುನಿಸಿಪಲ್ ಕಾರ್ಪಾಸಿಲಿಗೆ ಸೇರಿದ ಅಥವಾ ಸಾಮಾನು ವಗೈರೆ ಸಾಗಿಸುವದಕ್ಕಾಗಿ ಮೊಕರೂರ್ ಮಾಡಲ್ಪಟ್ಟ ಕ್ಯಾರೇಜುಗಳು, ಗಾಡಿಗಳು ಮತ್ತು ಜಾನವರುಗಳ ಮೇಲೆ ಮತ್ತು ಬಂದು ದಿವಸದಲ್ಲಿ 24 ಘಂಟೆ ಕಾಲದೊಳಗಾಗಿ ಅಂದರೆ ಬಂದು ಮಧ್ಯರಾತ್ರಿಯಿಂದ ಇನ್ನೊಂದು ಮಧ್ಯರಾತ್ರಿಯ ವರಿಗೂ ಯಾವ ಕ್ಯಾರೇಜು ಗಾಡಿ ಅಥವಾ ಜಾನವರುಗಳ ಮೇಲೆಯೇ ಆಗಲಿ ಬಂದುಸಾರಿಗಿಂತಲೂ ಹೆಚ್ಚಾಗಿ ಟೋಲು ವಸೂಲ್ಮಾಡಕೂಡದು.

2. ಟೋಲು ಮುಖಾಂತರ ಬರತಕ್ಕ ಸೈನಿಕರ ವಾಹನಕ್ಕಾಗಿ ಅಥವಾ ಅಂಥಾ ಸೈನಿಕರ ಸಾಮಾನು ವಗೈರೆ ಸಾಗಿಸತಕ್ಕ ಬಗ್ಗೆ ಉಪಯೋಗಿಸುವ ಗಾಡಿ ಅಥವಾ ಜಾನವರುಗಳ ಮೇಲೆ, ಮಿಲಿಟರಿ ಅಥವಾ ಗವರ್ಮೆಂಟ್ ಸ್ಟೋರಿಗೆ ಸಾಗಿಸಲ್ಪಡುವ ಸಾಮಾನುಗಳು ಇರತಕ್ಕ ಗಾಡಿ ಅಥವಾ ಜಾನವರುಗಳ ಮೇಲೆ ಸರ್ಕಾರಿ ಡ್ಯೂಟಿಯ ಮೇಲೆ ಬರತಕ್ಕ ಪೋಲೀಸು ಅಧಿಕಾರರು, ನಾಕರ ಮಾನೇರು ಮತ್ತು ಅವರಿಗೆ ಸಂಬಂಧಪಟ್ಟ ಜನಗಳು ಮತ್ತು ಸಾಮಾನುಗಳು ಇರುವ ಅವರ ಕ್ಯಾರೇಜುಗಳು, ಗಾಡಿಗಳು ಮತ್ತು ಜಾನವರುಗಳು ಇವುಗಳ ಮೇಲೆ ಮತ್ತೂ ಅರಮನೆ ಇಲಾಖೆಗೆ ಸೇರಿದ ಗಾಡಿಗಳು ಕ್ಯಾರೇಜುಗಳು, ಜಾನವರುಗಳು ಇವುಗಳ ಮೇಲೆ ಸಹ :—

ಎ. ಷೆಡ್ಯೂಲ್.

ನಂಬರ್.	ರಸ್ತೆಗಳ ಹೆಸರು.	ಉಕ್ತಡಗಳ ಹೆಸರು.
1	ರೈಲ್ವೆ ಸ್ಟೇಷ್ ರಸ್ತೆ ...	ಬಳಗೊಳದ ರಸ್ತೆ ಮತ್ತು ಸಿಕ್ಲೈ ರಸ್ತೆ ಇವೆರಡು ಜಂಕ್ಷ ಆಗುವ ಸ್ಥಳದಲ್ಲಿರುವ ಉಕ್ತಡ.
2	ಬಳಗೊಳದ ರಸ್ತೆ ...	ಕೆಂಪನಕಟ್ಟೆ ಉಕ್ತಡ.
3	ಶ್ರೀರಂಗಪಟ್ಟಣದ ರಸ್ತೆ ...	ಎರಕಟ್ಟೆ ಡಿಟೋ
4	ಬೆಂಗಳೂರು ರಸ್ತೆ ...	ವೀರನಗೆರೆ ಡಿಟೋ
5.	ಸಿಮಿಟೆರಿ ರಸ್ತೆ	ಬಂಗ್ಲಿ ಸಂತ್ರಿ ಡಿಟೋ
6	ಮಹದೇವಪುರದ ರಸ್ತೆ ..	ಜಲಪುರಿ ಡಿಟೋ
7	ಆಲನಹಳ್ಳಿ ರಸ್ತೆ ...	ಇಟ್ಟಿಗೆ ಗೂಡು ಡಿಟೋ
8	ರೇಸ್‌ಕೋರ್ಸು ರಸ್ತೆ ..	ರೋಣಸಂತ್ರಿ ಡಿಟೋ
9	ನಂಜನಗೂಡು ರಸ್ತೆ ..	ನಂಜನಗೂಡು ಡಿಟೋ
10	ಡಿಟೋ ..	ಹಾಲಿ ಉಕ್ತಡದ ಬಳಿ ವಿಧಾಯಕ ಮಾಡಿರುವಂತೆ ನಾಚನಹಳ್ಳಿ
11	ಮಾನಂದವಾಡಿ ರಸ್ತೆ ...	ಚಟ್ಟನಹಳ್ಳಿ ಉಕ್ತಡ.
12	ನೈಸರಾಯಿ ರಸ್ತೆ ..	ಹೊಲಗೇರಿ ಡಿಟೋ
13	ಚಾಮರಾಜ ಆಗ್ರಹಾರದ ಹಿಂಭಾಗದ ರಸ್ತೆ ..	ಡಿಟೋ
14	ಜೂಬಿಲಿ ರಸ್ತೆ ...	ಕುಕ್ಕನಹಳ್ಳಿ ಉಕ್ತಡ.
15	ಇಲವಾಲದ ರಸ್ತೆ ...	ಶ್ರೀರಾಂಪೇಟೆ ಡಿಟೋ

ಬಿ. ಷೆಡ್ಯೂಲ್.

ನಂಬರ್.	ತಪ್ಸೀಲು.	ದರ. ರೂ.	ಆ.	ಪೈ.
1	ಸ್ಪ್ರಿಂಗ್ ಇರತಕ್ಕ ಪ್ರತಿ ಬಂದು ನಾಲ್ಕು ಚಕ್ರದ ಕ್ಯಾರೇಜಿಗೆ	0	4	0
2	ಡಿಟೋ ಎರಡು ಚಕ್ರದ ಕ್ಯಾರೇಜಿಗೆ	0	2	0
3	ಮನುಷ್ಯರು ಯಾ ಎತ್ತುಗಳು, ಕುದುರೆಗಳು, ಹೇಸರಕತ್ತೆಗಳು ಇವುಗಳಿಂದ ಎಳೆಯಲ್ಪಟ್ಟ ಭರ್ತಿ ಗಾಡಿಗಳು ಅಥವಾ ಹ್ಯಾಕ್ನಿ ಗಾಡಿ 1ಕ್ಕೆ.	0	2	0
4	ಡಿಟೋ ಖಾಲಿ ಇರತಕ್ಕ ಪ್ರತಿ ಬಂದು ಗಾಡಿಗೆ	0	1	0
5	ಡಿಟೋ ಹೇರು ಹೇರಿಕ್ಕೊಂಡು ಬರತಕ್ಕ ಕೋಣ ಯಾ ಎತ್ತು 1ಕ್ಕೆ ..	0	0	6
6	ಡಿಟೋ ಸವಾರಿ ಅಥವಾ ಹೇರು ಹೇರಿಕ್ಕೊಂಡು ಬರತಕ್ಕ 13 ಹಿಡಿಗಳಿಗಿಂತಲೂ ಮಿಾರಿದ್ದ ಕುದುರೆ 1ಕ್ಕೆ.	0	1	0
7	ಹೇರು ಇಲ್ಲದೆ ಅಥವಾ ಸವಾರಿ ಇಲ್ಲದೆ ಬರತಕ್ಕ ಕುದುರೆ 1ಕ್ಕೆ	0	0	6
8	13 ಹಿಡಿಗಳು ಅಥವಾ ಅದಕ್ಕಿಂತ ಕಮ್ಮಿಯಾಗಿರತಕ್ಕ ಸವಾರಿ ಅಥವಾ ಹೇರು ಇರುವ ಕುದುರೆ 1ಕ್ಕೆ.	0	0	6
9	ಡಿಟೋ ಆನೆ 1ಕ್ಕೆ	0	8	0
10	ಡಿಟೋ ಒಂಟೆ 1ಕ್ಕೆ	0	1	0

ಜೆ. ಹನುಮಂತರಾವ್, ಫಾರ್ ಪ್ರೆಸಿಡೆಂಟ್.

ತಾರೀಖು 1ನೆ ಮಾರ್ಚಿ 1907.

ಎಲ್ಲಾ ಡೆಪ್ಯುಟಿ ಕಮಿಷನರಿಗೂ, ಅಮಲ್ದಾರರಿಗೂ, ಪಟೇಲರಿಗೂ ಸರ್ಕ್ಯುಲರ್.

ಕೂನೂರಿನಲ್ಲಿರುವ ವ್ಯೆಸ್ಸರ್ ಇಸ್ಟಿಟ್ಯೂಟಿನ ಡೈರೆಕ್ಟರಿಗೆ ಪ್ರತಿ ತಿಂಗಳಲ್ಲಿಯೂ 150 ರ ವರೆಗೆ (rabbits) ಕುಂದಿಲಿಗಳು (ಕಾಡು ಮೊಲಗಳಲ್ಲ) ಜರೂರಾಗಿ ಬೇಕಾಗಿವೆ.

ಎಲ್ಲಾ ಸಿವಿಲ್ ಅಧಿಕಾರಿಗಳು ಹೀಗೆ ಬೇಕಾಗಿರುವುದನ್ನು ಮೈಸೂರು ಸೀಮೆಯ ಗ್ರಾಮಗಳಲ್ಲಿ ಪ್ರಕಟಿಸಬೇಕೆಂದೂ ಬೆಂಗಳೂರು ಲಾಲ್‌ಬಾಗ್ ಸೂಪರ್‌ಟೆಂಡೆಂಟರು ಸದರಿ ಕುಂದಿಲಿಗಳನ್ನು ತೆಗೆದುಕೊಂಡು ಕೂನೂರಿಗೆ ರವಾನೆ ಮಾಡಲು ತಕ್ಕ ಏರ್ಪಾಡು ಮಾಡುತ್ತಾರೆಂದೂ ಲಾಲ್‌ಬಾಗಿನಲ್ಲಿ ಕುಂದಿಲಿಗಳನ್ನು ತಂದುಕೊಟ್ಟ ಕೂಡಲೆ ವ್ಯಾಪಾರಿಗಳಿಗೆ ಹಣ ಪಾವತಿಯಾಗುವುದೆಂದೂ ತಿಳಿಸಬೇಕೆಂದು ಕೋರಿ ಇದೆ.

ಜೆ. ಹಚ್ಲಿಯು., ಕಾರ್ನ್‌ವಾಲ್, ಕ್ಯಾಪ್ಟ್, ಐ. ಎಂ. ಎಸ್.,
ದಕ್ಷಿಣ ಇಂಡಿಯಾ ವ್ಯೆಸ್ಸರ್ ಇಸ್ಟಿಟ್ಯೂಟಿನ ಡೈರೆಕ್ಟರ್.